**Akashvani : Bangalore**
**Regional Bulletin In Kannada**
**17.03.2026 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**17.03.2026 / 14.30 hrs**

**<><*<><>*><>**

ಮುಖ್ಯಾಂಶಗಳು

**೧. ಸಭಾಧ್ಯಕ್ಷರ ಅಸಮಾಧಾನದ ಬೆನ್ನಲ್ಲೆ ಎಚ್ಚೆತ್ತ ಸರ್ಕಾರ; ವಿಧಾನಸಭೆಯಲ್ಲಿಂದು ಇಲಾಖಾವಾರು ಉತ್ತರಗಳಲ್ಲಿ ಸುಧಾರಣೆ**

**೨. ರಾಜ್ಯದಲ್ಲಿ ಅಕ್ರಮ ಮದ್ಯ ಮಾರಾಟಕ್ಕೆ ಕಡಿವಾಣ ಹಾಕಲು ಸರ್ಕಾರ ಕಠಿಣ ಕ್ರಮ- ಅಬಕಾರಿ ಸಚಿವ ಆರ್.ಬಿ.ತಿಮ್ಮಾಪುರ್**

**೩. ಮೂಲಸೌಕರ್ಯ ಕೊರತೆಯಿಂದ ಉದ್ದಿಮೆದಾರರು ನೆರೆ ರಾಜ್ಯಗಳಿಗೆ ವಲಸೆ ಹೋಗಿಲ್ಲ; ಮೇಲ್ಮನೆಯಲ್ಲಿ ಸಚಿವ ಭೈರತಿ ಸುರೇಶ್ ಸ್ಪಷ್ಟನೆ**

**೪. ರಾಜ್ಯದ ಬಾಕಿ ಇರುವ ನೀರಾವರಿ ಯೋಜನೆಗಳಿಗೆ ಕೇಂದ್ರದ ಅನುಮತಿ ಕುರಿತಂತೆ ಸಂಸದರ ಜೊತೆ ಇಂದು ಸಚಿವರ ನಿಯೋಗ ಚರ್ಚೆ**

**೫. ನಾಳೆಯಿಂದ ರಾಜ್ಯಾದ್ಯಂತ ಎಸ್‌ಎಸ್‌ಎಲ್‌ಸಿ ಪರೀಕ್ಷೆ; ಪರೀಕ್ಷಾ ಕೇಂದ್ರಗಳ ಸುತ್ತ ಬಿಗಿ ಭದ್ರತೆ**

**<><*<><>*><>**

ವಿಧಾನಸಭಾಧ್ಯಕ್ಷ ಯು.ಟಿ.ಖಾದರ್, ಶಾಸಕರ ಪ್ರಶ್ನೆಗಳಿಗೆ ಉತ್ತರಿಸದ ಸಚಿವರು ಮತ್ತು ಅಧಿಕಾರಗಳ ವಿರುದ್ಧ ನಿನ್ನೆ ಅಸಮಾಧಾನಗೊಂಡ ಬೆನ್ನಲ್ಲೆ ಸರ್ಕಾರ ಇಂದು ಎಚ್ಚೆತ್ತುಕೊಂಡಿದೆ. ಸದನದಲ್ಲಿಂದು ಸಭಾಧ್ಯಕ್ಷ ಯು,ಟಿ.ಖಾದರ್, ಇಲಾಖಾವಾರು ಉತ್ತರಗಳ ಅಂಕಿ ಅಂಶಗಳನ್ನು ಪ್ರಸ್ತಾಪಿಸಿ, ಈಗ ಸ್ವಲ್ಪ ಸುಧಾರಣೆ ಕಂಡುಬರುತ್ತಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಕಳೆದ ಐದು ದಿನಗಳಿಂದ ಕೇವಲ ಶೇಕಡಾ ೧೦ ರಿಂದ ೩೦ ರಷ್ಟು ಮಾತ್ರ ಉತ್ತರ ಬರುತ್ತಿತ್ತು. ಸಾರ್ವಜನಿಕರ ಹಿತದೃಷ್ಟಿಯಿಂದ ಪ್ರತಿಯೊಂದು ಪ್ರಶ್ನೆಗೂ ಸರ್ಕಾರ ಜವಾಬ್ದಾರಿಯಿಂದ ಉತ್ತರಿಸಬೇಕು ಎಂದು ಸಭಾಧ್ಯಕ್ಷ ಯು.ಟಿ.ಖಾದರ್ ಪುನರುಚ್ಚರಿಸಿದ್ದಾರೆ. ಶಾಸಕರ ಪ್ರಶ್ನೆಗಳಿಗೆ ಸಚಿವರು ಮತ್ತು ಅಧಿಕಾರಿಗಳು ಉತ್ತರ ನೀಡದೇ ಇರುವುದರಿಂದ ಅಸಮಾಧಾನಗೊಂಡು ಸಭಾಧ್ಯಕ್ಷ ಖಾದರ್

ನಿನ್ನೆ ಸದನದಿಂದ ಎದ್ದು ಹೋಗಿದ್ದು ವ್ಯಾಪಕ ಚರ್ಚೆಗೆ ಗ್ರಾಸವಾಗಿತ್ತು. ಅದರ ಬೆನ್ನಲ್ಲೇ ಕಂದಾಯ, ಅಲ್ಪಸಂಖ್ಯಾತ ಹಾಗೂ ಪಿಡಬ್ಲ್ಯುಡಿ ಇಲಾಖೆಗಳ ಒಟ್ಟು ಮೂವರು ಅಧಿಕಾರಿಗಳನ್ನು ಅಮಾನತುಗೊಳಿಸಲಾಗಿತ್ತು.

<><*<><>*><>

ರಾಜ್ಯದಲ್ಲಿ ಅಕ್ರಮ ಮದ್ಯ ಮಾರಾಟಕ್ಕೆ ಕಡಿವಾಣ ಹಾಕಲು ಇಲಾಖೆ ಎಲ್ಲಾ ರೀತಿಯ ಪ್ರಯತ್ನ ನಡೆಸಲಿದೆ ಎಂದು ಅಬಕಾರಿ ಸಚಿವ ಆರ್.ಬಿ.ತಿಮ್ಮಾಪುರ್ ವಿಧಾನಸಭೆಯಲ್ಲಿ ತಿಳಿಸಿದ್ದಾರೆ. ಪ್ರಶ್ನೋತ್ತರ ಕಲಾಪದ ವೇಳೆ ಶಾಸಕ ಬಸವನಗೌಡ ದದ್ದಲ್ ರಾಯಚೂರು ಜಿಲ್ಲೆಯಲ್ಲಿ ಅಲ್ಲಲ್ಲಿ ಅಕ್ರಮ ಮದ್ಯ ಮಾರಾಟ ನಡೆಯುತ್ತಿದೆ. ಮಾದಕ ವಸ್ತುಗಳ ಹಾವಳಿ ಹೆಚ್ಚಾಗುತ್ತಿದೆ. ಹೀಗಾಗಿ ಸರ್ಕಾರ ಕಟ್ಟುನಿಟ್ಟಿನ ಕ್ರಮ ತೆಗೆದುಕೊಳ್ಳಬೇಕು ಎಂದು ಮನವಿ ಮಾಡಿದರು.  ಇದಕ್ಕೆ ಶಾಸಕರಾದ ಕರೆಮ್ಮ ನಾಯಕ್ ಮತ್ತು ಶರಣಗೌಡ ಪಾಟೀಲ್ ಧ್ವನಿಗೂಡಿಸಿ ಇದು ಇಡೀ ರಾಜ್ಯದಲ್ಲಿ ಇದೆ. ದಯವಿಟ್ಟು ಇದಕ್ಕೆ ಸೂಕ್ತ ಪರಿಹಾರ ಕೊಡಿ ಎಂದು ಒತ್ತಾಯ ಮಾಡಿದರು. ಇದಕ್ಕೆ ಉತ್ತರಿಸಿದ ಸಚಿವ ತಿಮ್ಮಾಪುರ್, ಆಂಧ್ರದಿಂದ ಮದ್ಯ ತಂದು ಅಕ್ರಮವಾಗಿ ಮಾರಾಟ ಮಾಡಲಾಗುತ್ತಿದೆ. ಪೌಡರ್ ತಂದು ಶೇಂದಿ ತಯಾರು ಮಾಡಿಯೂ ಮಾರಾಟ ಮಾಡಲಾಗುತ್ತಿದೆ. ಅಂತಹವರನ್ನು ಗಡಿಪಾರು ಮಾಡಲು ಕ್ರಮ ತೆಗೆದುಕೊಳ್ಳಲಾಗುವುದು ಎಂದು ಸದನಕ್ಕೆ ಭರವಸೆ ನೀಡಿದ್ದಾರೆ.

<><*<><>*><>

ಮೂಲಸೌಕರ್ಯಗಳ ಕೊರತೆಯಿಂದ ಉದ್ದಿಮೆದಾರರು ನೆರೆ ರಾಜ್ಯಗಳಿಗೆ ವಲಸೆ ಹೋಗಿಲ್ಲ ಎಂದು ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ತಿಳಿಸಿದ್ದಾರೆ. ವಿಧಾನಪರಿಷತ್‌ನಲ್ಲಿ ಇಂದು ಪ್ರಶ್ನೋತ್ತರ ವೇಳೆಯಲ್ಲಿ ಬಿಜೆಪಿಯ ರವಿಕುಮಾರ್ ಅವರ ಪ್ರಶ್ನೆಗೆ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರ ಪರವಾಗಿ ಉತ್ತರ ನೀಡಿದ ಸಚಿವರು, ಬಿಡದಿಯಲ್ಲಿ ಏಷ್ಯಾದಲ್ಲೇ ಅತಿದೊಡ್ಡ ಟೊಯೋಟಾ ಘಟಕವಿದ್ದು, ವ್ಯವಹಾರದ ಕಾರಣದಿಂದ ಟೊಯೋಟಾದ ಮತ್ತೊಂದು ಘಟಕವನ್ನು ಮಹಾರಾಷ್ಟ್ರ ತೆರೆಯಲಾಗುತ್ತಿದೆ. ಇದಕ್ಕೆ ಮೂಲಭೂತ ಸೌಕರ್ಯಗಳ ಕೊರತೆ ಕಾರಣವಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ ರಾಜ್ಯದ ಕೈಗಾರಿಕಾ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಹೇಳಿದ್ದಾರೆ. ಎರಡು ಸಾವಿರದ ೨೮ ಯೋಜನೆಗಳಿಗೆ ಅನುಮೋದನೆ ನೀಡಿರುವುದರಿಂದ ೫ ಲಕ್ಷ ೧೧ ಸಾವಿರದ ೭೩೨ ಕೋಟಿ ಬಂಡವಾಳ ಹೂಡಿಕೆ ಮತ್ತು ೭ ಲಕ್ಷ ೧೭ ಸಾವಿರದ ೧೪೮ ಉದ್ಯೋಗಾವಕಾಶ ನಿರೀಕ್ಷಿಸಲಾಗಿದೆ ಎಂದು ತಿಳಿಸಿದ್ದಾರೆ.

<><*<><>*><>

ಭದ್ರಾವತಿ ನಗರಸಭೆ ವ್ಯಾಪ್ತಿಯಲ್ಲಿ ಕೈಗೊಂಡಿದ್ದ ಒಳಚರಂಡಿ ಯೋಜನೆ ಕಾಮಗಾರಿಯಲ್ಲಿ ಲೋಪದೋಷಗಳ ಬಗ್ಗೆ ತನಿಖೆ ನಡೆಸಿ ತಪ್ಪಿತಸ್ಥ ಗುತ್ತಿಗೆದಾರರ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲಾಗುವುದು ಎಂದು ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಮೇಲ್ಮನೆಯಲ್ಲಿಂದು ತಿಳಿಸಿದ್ದಾರೆ. ಪ್ರಶ್ನೋತ್ತರ ವೇಳೆಯಲ್ಲಿ ಕಾಂಗ್ರೆಸ್ ಸದಸ್ಯೆ ಬಲ್ಕಿಸ್ ಬಾನು ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ವಿಶ್ವಬ್ಯಾಂಕ್ ನೆರವಿನಡಿಯಲ್ಲಿ ಕೆಎಂಆರ್‌ಪಿ ಯೋಜನೆಯಲ್ಲಿ ಭದ್ರಾವತಿ ಸೇರಿದಂತೆ ೩೨ ನಗರ ಮತ್ತು ಪಟ್ಟಣಗಳಲ್ಲಿ ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸುವ ಕಾಮಗಾರಿಯನ್ನು ಕೈಗೊಳ್ಳಲಾಗಿದೆ. ಭದ್ರಾವತಿ ನಗರದಲ್ಲಿ ೧೬ ಕೋಟಿ ರೂಪಾಯಿ ಮತ್ತು ಅಮೃತ್ ೧ ರಲ್ಲಿ ೪೦ ಕೋಟಿ ರೂಪಾಯಿ ವೆಚ್ಚದಲ್ಲಿ ಒಳಚರಂಡಿ ಕಾಮಗಾರಿ ಕೈಗೊಂಡು ನಗರಸಭೆಗೆ ಹಸ್ತಾಂತರ ಮಾಡಲಾಗಿದೆ. ಅದರಂತೆ ನಗರಸಭೆ ಈ ಒಳಚರಂಡಿ ವ್ಯವಸ್ಥೆಯನ್ನು ನಿರ್ವಹಣೆ ಮಾಡಲಿದೆ ಎಂದು ಸದನಕ್ಕೆ ತಿಳಿಸಿದರು.

<><*<><>*><>

ರಾಜ್ಯದ ನೀರಾವರಿ ಯೋಜನೆಗಳಿಗೆ ಕೇಂದ್ರ ಸರ್ಕಾರ ಅನುಮತಿ ಬಾಕಿ ಉಳಿಸಿಕೊಂಡಿದೆ. ಈ ಹಿನ್ನೆಲೆಯಲ್ಲಿ ತಾವೂ ಸೇರಿದಂತೆ ಸಚಿವರಾದ ಹೆಚ್.ಕೆ.ಪಾಟೀಲ್, ಎಂ.ಬಿ.ಪಾಟೀಲ್ ರಾಜ್ಯದ ಎಲ್ಲಾ ಸಂಸದರನ್ನು ಭೇಟಿ ಮಾಡಿ, ರಾಜ್ಯದ ನೀರಾವರಿ ಯೋಜನೆಗಳ ಬಗ್ಗೆ ಚರ್ಚಿಸಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನೀರಾವರಿ ವಿಚಾರಗಳ ಬಗ್ಗೆ ತೀರ್ಮಾನ ಮಾಡುವಂತೆ ಕೇಂದ್ರ ಸರ್ಕಾರಕ್ಕೆ ಒತ್ತಾಯಿಸಲಾಗುವುದು ಎಂದು ಹೇಳಿದ್ದಾರೆ.

<><*<><>*><>

ವಿದ್ಯಾರ್ಥಿಗಳ ಶೈಕ್ಷಣಿಕ ಜೀವನದ ಅತೀ ಪ್ರಮುಖ ಘಟ್ಟವಾಗಿರುವ ಎಸ್‌ಎಸ್‌ಎಲ್‌ಸಿ ಪರೀಕ್ಷೆ ನಾಳೆಯಿಂದ ರಾಜ್ಯದಾದ್ಯಂತ ಆರಂಭವಾಗಲಿದೆ. ಶಿಕ್ಷಣ ಇಲಾಖೆ ಅತ್ಯಂತ ಪಾರದರ್ಶಕತೆಯಿಂದ ಪರೀಕ್ಷೆ ನಡೆಸಲು ಸಿದ್ದತೆ ಮಾಡಿಕೊಂಡಿದೆ. ರಾಜ್ಯದಲ್ಲಿ ಸುಮಾರು ೯ ಲಕ್ಷ ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಪರೀಕ್ಷಾ ಕೇಂದ್ರಗಳ ಸುತ್ತ ೨೦೦ ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಸಿಸಿಟಿವಿ ಕಣ್ಗಾವಲಿನಲ್ಲಿ ಭದ್ರತೆಯೊಂದಿಗೆ ಪರೀಕ್ಷೆಗಳು ನಡೆಯಲಿವೆ. ನಾಳೆಯಿಂದ ಏಪ್ರಿಲ್ ೨ರವರೆಗೆ ಪರೀಕ್ಷೆಗಳು ನಡೆಯಲಿವೆ. ಕೆಎಸ್‌ಆರ್‌ಟಿಸಿ ವಿದ್ಯಾರ್ಥಿಗಳಿಗೆ ವಿಶೇಷ ಪ್ಯಾಕೇಜ್ ಘೋಷಿಸಿದೆ. ಚಿಕ್ಕಮಗಳೂರು ಜಿಲ್ಲೆಯಲ್ಲಿ ನಾಳೆಯಿಂದ ಆರಂಭಗೊಳ್ಳಲಿರುವ

ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಸಕಲ ಸಿದ್ಧತೆಗಳು ಪೂರ್ಣಗೊಂಡಿದ್ದು, ಜಿಲ್ಲೆಯ ಒಟ್ಟು ೫೨ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ ಎಂದು ಜಿಲ್ಲಾಧಿಕಾರಿ ನಾಗರಾಜ್ ಎನ್.ಎಂ ತಿಳಿಸಿದ್ದಾರೆ. ಗ್ರಾಮೀಣ ಪ್ರದೇಶದಿಂದ ಪರೀಕ್ಷೆಗೆ ಬರುವ ವಿದ್ಯಾರ್ಥಿಗಳು ತಮ್ಮ ಪ್ರವೇಶ ಪತ್ರ ತೋರಿಸಿ ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲಿ ಉಚಿತವಾಗಿ ಪ್ರಯಾಣಿಸುವ ವ್ಯವಸ್ಥೆ ಮಾಡಲಾಗಿದೆ ಎಂದು ಹೇಳಿದ್ದಾರೆ. ಉತ್ತರಕನ್ನಡ ಜಿಲ್ಲೆಯಲ್ಲಿಯೂ ಸಾಮಾನ್ಯ ಹಾಗೂ ವೇಗದೂತ ಬಸ್ಸುಗಳಲ್ಲಿ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳು ಉಚಿತವಾಗಿ ಪ್ರಯಾಣ ಮಾಡಬಹುದಾಗಿದೆ ಎಂದು ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಪ್ರಕಟಣೆ ತಿಳಿಸಿದೆ. ಬಳ್ಳಾರಿ ಜಿಲ್ಲೆಯ ೮೫ ಪರೀಕ್ಷಾ ಕೇಂದ್ರಗಳಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ ನಡೆಯಲಿದ್ದು, ಇದಕ್ಕಾಗಿ ಜಿಲ್ಲಾಡಳಿತ ಸಕಲ ಸಿದ್ಧತೆ ಮಾಡಿಕೊಂಡಿದೆ ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ತಿಳಿಸಿದ್ದಾರೆ. ಜಿಲ್ಲೆಯಲ್ಲಿ ೨೩ ಸಾವಿರದ ೨೮೧ ವಿದ್ಯಾರ್ಥಿಗಳು ಪರೀಕ್ಷೆ ಬರೆಯಲು ಹೆಸರು ನೊಂದಾಯಿಸಿಕೊಂಡಿದ್ದಾರೆ. ವಿದ್ಯಾರ್ಥಿಗಳು ಯಾವುದೇ ಭಯವಿಲ್ಲದೆ ಪರೀಕ್ಷೆ ಬರೆಯುವಂತೆ ಅವರು ಮನವಿ ಮಾಡಿದ್ದಾರೆ.

**<><*<><>*><>**

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಅಕ್ರಮಗಳಿಗೆ ಅವಕಾಶವಾಗದಂತೆ ೧೨ ಕಡೆಗಳಲ್ಲಿ ಚೆಕ್‌ಪೋಸ್ಟ್‌ಗಳನ್ನು ತೆರೆಯಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶೇಖರ್.ಹೆಚ್.ಟಿ. ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದಕ್ಷಿಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಒಟ್ಟು ೮ ಪೊಲೀಸ್ ಠಾಣೆಗಳು ಬರಲಿದ್ದು, ಪ್ರತಿಯೊಂದು ಠಾಣಾ ವ್ಯಾಪ್ತಿಯಲ್ಲೂ ವಿಶೇಷ ನಿಗಾ ವಹಿಸಲಾಗಿದೆ. ಚುನಾವಣಾ ಅಕ್ರಮಗಳನ್ನು ತಡೆಯಲು ಚೆಕ್‌ಪೋಸ್ಟ್‌ಗಳ ಜೊತೆಗೆ ೧೦ ಮೊಬೈಲ್ ಸ್ಕ್ವಾಡ್‌ಗಳನ್ನು ನಿಯೋಜಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

**ಧ್ವನಿ: ಪೊಲೀಸ್ ವರಿಷ್ಠಾಧಿಕಾರಿ ಶೇಖರ್ ಹೆಚ್.ಟಿ ( ೩೦ ಸೆಕೆಂಡ್ಸ್)**

**<><*<><>*><>**

ವಿಧಾನಸಭಾಧ್ಯಕ್ಷ ಯು.ಟಿ.ಖಾದರ್, ವಿಧಾನಸಭೆಯಲ್ಲಿ ನಿನ್ನೆ ಕೈಗೊಂಡ ನಿರ್ಣಯಕ್ಕೆ ರಾಷ್ಟ್ರೀಯ ಮಟ್ಟದಲ್ಲಿ ಶ್ಲಾಘನೆ ವ್ಯಕ್ತವಾಗಿದೆ. ಮುಂಬೈನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಸಂಸದ ಸಂಜಯ್ ರಾವತ್, ವಿಧಾನಸಭೆಯ ಸಭಾಧ್ಯಕ್ಷರಾಗಲಿ, ಲೋಕಸಭಾಧ್ಯಕ್ಷರಾಗಲಿ, ಸಭಾಧ್ಯಕ್ಷರ ಕುರ್ಚಿಯಲ್ಲಿ ಕುಳಿತರೆ ಅವರು ನಿಷ್ಪಕ್ಷಪಾತವಾಗಿರಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ. ತಟಸ್ಥತೆಯ ಬಗ್ಗೆ ಕರ್ನಾಟಕ ವಿಧಾನಸಭಾ ಅಧ್ಯಕ್ಷರು ತೆಗೆದುಕೊಂಡ ಆದರ್ಶ ನೀತಿಗಳನ್ನು ಮಹಾರಾಷ್ಟ್ರದ ಸಭಾಧ್ಯಕ್ಷರು ನೋಡಿ ಕಲಿಯಬೇಕು ಎಂದು ತಿಳಿಸಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>